ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಕುರಿಗಾಹಿಗಳು ಬಿಟ್ಟು ಹೋಗಿರುವ ಕುದುರೆಗಳ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು):-

919 (978) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕರ್ನಾಟಕದ ಹುಬ್ಬಳ್ಳಿ, ಕುಂದಗೋಳ, ನವಲಗುಂದ ಮೊದಲಾದ ಕಡೆಗಳಲ್ಲಿ ಕುರಿಗಾಹಿಗಳು ತಮ್ಮ ಕುದುರೆಗಳನ್ನು ಸಾಕಲಾಗದೆ ಬಿಟ್ಟು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿಯಾಗಿ ಬಿಟ್ಟು ಹೋಗಿರುವ ಸಾಕು ಕುದುರೆಗಳ ಸಂಖ್ಯೆ ಎಷ್ಟು ;

(ಆ) ಈ ಮೂಕ ಪ್ರಾಣಿಗಳಾದ ಕುದುರೆಗಳು ಆಹಾರವನ್ನು ಹುಡುಕಿಕೊಂಡು ಕೃಷಿಕರ ಹೊಲಗಳಿಗೆ ದಾಳಿ ಮಾಡಿ ಬೆಳೆಗಳನ್ನು ಹಾಳು ಮಾಡುತ್ತಿರುವುದಲ್ಲದೆ ಕೆಲವೊಮ್ಮೆ ಬೀದಿ ನಾಯಿಗಳ ದಾಳಿಗೆ ತುತ್ತಾಗಿ ಮರಣ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುದುರೆಗಳ ರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಕುರಿಗಾಹಿಗಳು ತಾವು ಸಾಕಿದ ಕುದುರೆಗಳನ್ನು ಅನಾಥವಾಗಿ ಬಿಟ್ಟು ಹೋಗದಂತೆ ತಡೆಯಲು ಸರ್ಕಾರ ಕುರಿಗಾಹಿಗಳಿಗೆ ಯಾವ ಸೌಲಭ್ಯ ನೀಡುತ್ತದೆ ?